ನಾಳೆ ಪಕ್ಷಾತೀತವಾಗಿ ತಿರಂಗಾ ಯಾತ್ರೆ: ಆರ್.ಅಶೋಕ್

ಮೇ 16, 17ರಂದು ಜಿಲ್ಲಾ ಕೇಂದ್ರಗಳಲ್ಲಿ ಆಯೋಜನೆ

ಬೆಂಗಳೂರು, ಮೇ 13: 'ರಾಷ್ಟ್ರ ರಕ್ಷಣೆಗಾಗಿ ನಾಗರಿಕರು' ಅಡಿಯಲ್ಲಿ ಭಾರತದ ಸೇನೆಯೊಂದಿಗೆ ನಾವಿದ್ದೇವೆ ಎನ್ನುವ ಸಂದೇಶ ಸಾರುವ ನಿಟ್ಟಿನಲ್ಲಿ ಪಕ್ಷಾತೀತವಾಗಿ ಮೇ 15ರ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನಲ್ಲಿ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾಗುವುದು ಎಂದು ವಿಪಕ್ಷ ನಾಯಕ ಆರ್. ಅಶೋಕ್ ತಿಳಿಸಿದ್ದಾರೆ.

ಮಂಗಳವಾರ ನಗರದ ಮಲ್ಲೇಶ್ವರದ ಬಿಜೆಪಿ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ಐಕ್ಯತೆ ಪ್ರದರ್ಶನಕ್ಕಾಗಿ ತಿರಂಗಾ ಯಾತ್ರೆ ನಡೆಯುತ್ತಿದೆ. ದೇಶದ ಸೈನಿಕರನ್ನು ಬೆಂಬಲಿಸಿ ಸೇನಾ ಪಡೆಯೊಂದಿಗೆ ನಾವಿದ್ದೇವೆ ಎಂಬ ಬದ್ಧತೆಯೊಂದಿಗೆ ಮೇ 15ರಂದು ಬೆಂಗಳೂರಿನ ಮಲ್ಲೇಶ್ವರದ ಸಿರೂರು ಪಾರ್ಕ್ ನಿಂದ 18ನೇ ಅಡ್ಡರಸ್ತೆವರೆಗೂ ತಿರಂಗಾ ಯಾತ್ರೆ ನಡೆಯಲಿದೆ. ನಾಗರಿಕರು ಯಾವುದೇ ರಾಜಕೀಯ ಇಲ್ಲದೆ ರಾಷ್ಟ್ರ ರಕ್ಷಣೆಗಾಗಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಮೇ 16 ಮತ್ತು 17ರಂದು ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ಮೇ 18ರಿಂದ 23ರ ವರೆಗೂ ಎಲ್ಲ ತಾಲೂಕು ಕೇಂದ್ರಗಳಲ್ಲಿ ತಿರಂಗಾ ಯಾತ್ರೆ ನಡೆಯಲಿದೆ. ಇದು ಪಕ್ಷಾತೀತ ಯಾತ್ರೆಯಾಗಿದ್ದು, ಎಲ್ಲ ರಾಜಕೀಯ ಪಕ್ಷಗಳು ಇದರಲ್ಲಿ ಪಾಲ್ಗೊಂಡು ದೇಶದಲ್ಲಿ ನಾವೆಲ್ಲರೂ ಒಟ್ಟಾಗಿದ್ದೇವೆ ಎಂಬ ಸಂದೇಶವನ್ನು ರವಾನಿಸೋಣ ಎಂದು ಆರ್.ಅಶೋಕ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ್, ಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್, ಬಿಜೆಪಿ ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್, ವಕ್ತಾರ ಪ್ರಕಾಶ್ ಶೇಷರಾಘವಾಚಾರ್, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಉಪಸ್ಥಿತರಿದ್ದರು.

ಅಮೆರಿಕದ ಮಾತು ಕೇಳಿ ಯುದ್ಧ ನಿಲ್ಲಿಸಿಲ್ಲ

ಯುದ್ಧ ನಿಲ್ಲಿಸಿದ ಲಾಭವನ್ನು ಯಾರೋ ತೆಗೆದುಕೊಳ್ಳಲಿಕ್ಕೆ ಏನೇನೋ ಮಾತನಾಡುತ್ತಾರೆ. ಸಚಿವ ಕೃಷ್ಣಬೈರೇಗೌಡರು ಯುದ್ಧ ಮುಂದುವರಿಸಬಹುದಿತ್ತು ಎಂದು ಹೇಳಿದ್ದಾರೆ. ಸಿಎಂ ಸಿದ್ದರಾಮಯ್ಯ ಯುದ್ಧ ಬೇಡ ಎಂದಿದ್ದರು. ಕದನ ವಿರಾಮದ ಬಗ್ಗೆ ಯಾರೋ ನಾಲ್ಕು ಜನ ತೀರ್ಮಾನ ಮಾಡುವುದಲ್ಲ. ಇದು ಸೈನಿಕರು ತೆಗೆದುಕೊಂಡಿರುವ ತೀರ್ಮಾನ. ಪ್ರಧಾನಿ ಮೋದಿಯವರು ಸೈನಿಕರ ಅಭಿಪ್ರಾಯ ಪಡೆದೇ ಕದನ ವಿರಾಮ ಘೋಷಿಸಿದ್ದಾರೆ. ಅಮೆರಿಕದ ಮಾತನ್ನು ಕೇಳಿ ಯಾರೂ ಯುದ್ಧ ನಿಲ್ಲಿಸಿಲ್ಲ. ಇಷ್ಟು ಸಾಮಾನ್ಯ ಜ್ಞಾನ ಕಾಂಗ್ರೆಸ್‌ನವರಿಗೆ ಇದ್ದರೆ ಸಾಕು ಎಂದು ಆರ್.ಅಶೋಕ್ ತಿಳಿಸಿದರು.

ಸಿಬಿಎಸ್‌ಸಿ ಫಲಿತಾಂಶ: 10ನೇ ತರಗತಿಯ 3 ವಿದ್ಯಾರ್ಥಿಗಳಿಗೆ 495 ಅಂಕ

ಬೆಂಗಳೂರು, ಮೇ 13: ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯ(ಸಿಬಿಎಸ್‌ಇ) 10 ಮತ್ತು 12ನೇ ತರಗತಿಗಳ ಪರೀಕ್ಷೆ ಫಲಿತಾಂಶ ಪ್ರಕಟಿಸಿದ್ದು, ಬೆಂಗಳೂರಿನ ಶ್ರೀ ಚೈತನ್ಯ ಟೆಕ್ನೋ ಸ್ಕೂಲ್‌ನ 10ನೇ ತರಗತಿಯ 3 ವಿದ್ಯಾರ್ಥಿಗಳು 500ಕ್ಕೆ 495 ಹಾಗೂ 12ನೇ ತರಗತಿಯಲ್ಲಿ 500ಕ್ಕೆ 496 ಅಂಕಗಳೊಂದಿಗೆ ಓರ್ವ ವಿದ್ಯಾರ್ಥಿ ಅತ್ಯುತ್ತಮ ಅಂಕಗಳನ್ನು ಗಳಿಸಿ ಉತ್ತೀರ್ಣರಾಗಿದ್ದಾರೆ.

ಮೇಲ್ಕಂಡ ಶಾಲೆಯ 10ನೇ ತರಗತಿಯ ಒಟ್ಟು 20 ವಿದ್ಯಾರ್ಥಿಗಳು 490 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದ್ದಾರೆ ಮತ್ತು 12ನೆ ತರಗತಿಯಲ್ಲಿ 12 ಮಂದಿ ವಿದ್ಯಾರ್ಥಿಗಳು 490 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದ್ದಾರೆ. ಈ ಸಾಧನೆ ಗೈದ ವಿದ್ಯಾರ್ಥಿಗಳನ್ನು ಸ್ಕೂಲ್‌ನ ಪ್ರಾಂಶುಪಾಲರು ಮತ್ತು ಸಿಬ್ಬಂದಿ ಶ್ಲಾಘಿಸಿದ್ದಾರೆ ಎಂದು ಶಿಕ್ಷಣ ಸಂಸ್ಥೆಗಳ ನಿರ್ದೇಶಕಿ ಸುಷ್ಮಾ ಬೊಪ್ಪಣ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ದಲಿತರಿಗೆ ದೇವಸ್ಥಾನ ಪ್ರವೇಶಕ್ಕೆ ಅಡ್ಡಿ ಆರೋಪಿಗಳನ್ನು ಶೀಘ್ರದಲ್ಲಿ ಬಂಧಿಸುವಂತೆ ದಲಿತ ಹಕ್ಕುಗಳ ಸಮಿತಿ ಆಗ್ರಹ

ಬೆಂಗಳೂರು, ಮೇ 13: ತುಮಕೂರು ಜಿಲ್ಲೆ ಮಧುಗಿರಿ ತಾಲೂಕು, ಕವಣದಲ ಗ್ರಾಮದಲ್ಲಿ ದಲಿತರು ದೇವಸ್ಥಾನ ಪ್ರವೇಶಿಸಲು ತೆರಳಿದ ವೇಳೆ ಮೇಲ್ಜಾತಿಯವರು ಅಡ್ಡಿಪಡಿಸಿ, ದೌರ್ಜನ್ಯವೆಸಗಿದ್ದಾರೆ. ಈ ಸಂಬಂಧ ತಪ್ಪಿತಸ್ಥರನ್ನು ತಕ್ಷಣವೇ ಬಂಧಿಸಬೇಕು ಎಂದು ಕರ್ನಾಟಕ ದಲಿತ ಹಕ್ಕುಗಳ ಸಮಿತಿ ಆಗ್ರಹಿಸಿದೆ.

ಮಂಗಳವಾರ ಈ ಸಂಬಂಧ ಪ್ರಕಟನೆ ನೀಡಿರುವ ಸಮಿತಿ ಪ್ರಧಾನ ಕಾರ್ಯದರ್ಶಿ ಎನ್.ರಾಜಣ್ಣ ಸಂಚಾಲಕ ಗೋಪಾಲಕೃಷ್ಣ ಹರಳಹಳ್ಳಿ, 'ದಲಿತರು ದೇವಸ್ಥಾನ ಪ್ರವೇಶ ಮಾಡಿದರೆ ಮೈಲಿಗೆ ಆಗುತ್ತದೆ ಎಂದು ಅಸ್ಪೃಶ್ಯತೆ, ಜಾತಿ ತಾರತಮ್ಯ ಮಾಡಿ ದಲಿತರನ್ನು ಹೀಯಾಳಿಸಿ ಅವಮಾನ ಮಾಡಿದ್ದಾರೆ. ಸಂವಿಧಾನದ ಹಕ್ಕುಗಳನ್ನು ಧಿಕ್ಕರಿಸುವವರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಒತ್ತಾಯಿಸಿದ್ದಾರೆ.

ದಲಿತರ ಮೇಲೆ ದೌರ್ಜನ್ಯ ನಡೆಸಿರುವ ಮೇಲ್ಜಾತಿಯವರೊಂದಿಗೆ ರಾಜಿ-ಸಂಧಾನಗಳ ಮೂಲಕ ದೌರ್ಜನ್ಯ ತಡೆಯಲು ಸಾಧ್ಯವಾಗುವುದಿಲ್ಲ. ಗೃಹಮಂತ್ರಿ ಡಾ.ಜಿ.ಪರಮೇಶ್ವರ್ ಅವರ ತವರು ಜಿಲ್ಲೆಯಲ್ಲಿ ಇಡೀ ದೇಶವೇ ತಲೆತಗ್ಗಿಸುವ ಕೃತ್ಯ ನಡೆದಿದೆ. ತಕ್ಷಣವೇ ಆರೋಪಿಗಳನ್ನು ಬಂಧಿಸಿ, ಕಾನೂನು ರೀತಿಯಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಕುರ್‌ಆನ್ ಸುಟ್ಟ ಕಿಡಿಗೇಡಿಗಳನ್ನು ಪತ್ತೆ ಹಚ್ಚಿ, ಕಠಿಣ ಶಿಕ್ಷೆ ವಿಧಿಸಲು ಆಗ್ರಹ

ಬೆಂಗಳೂರು, ಮೇ 13: ಬೆಳಗಾವಿ ತಾಲೂಕಿನ ಸಂತಿ ಬಸ್ತವಾಡ ಗ್ರಾಮದ ಮಸೀದಿಯಲ್ಲಿದ್ದ ಇಸ್ಲಾಮ್ ಧರ್ಮಗ್ರಂಥ ಕುರ್‌ಆನ್ ಮತ್ತು ಹದೀಸ್ ಅನ್ನು ಸೋಮವಾರ ಕಿಡಿಗೇಡಿಗಳು ಸುಟ್ಟು ಹಾಕಿದ್ದಾರೆ. ಕೂಡಲೇ ಕಿಡಿಗೇಡಿಗಳನ್ನು ಪತ್ತೆ ಹಚ್ಚಿ, ಕಠಿಣ ಶಿಕ್ಷೆ ವಿಧಿಸಿ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕಾರ್ಯಾಧ್ಯಕ್ಷ ಹಬೀಬುಲ್ಲಾ ಖಾನ್ ಆಗ್ರಹಿಸಿದ್ದಾರೆ.

ರಾಜ್ಯದಲ್ಲಿ ಎಲ್ಲಿಯೂ ಈ ರೀತಿಯ ಘಟನೆ ನಡೆದಿಲ್ಲ. ಆದರೆ, ಬೆಳಗಾವಿಯಲ್ಲಿ ಮಾತ್ರ ಇಂತಹ ಘಟನೆ ನಡೆದಿದೆ. ಈ ಘಟನೆ ಹಿಂದೆ ಕಾಣದ ಕೈಗಳ ಕೈವಾಡ ಅಡಗಿದೆ. ಈ ಘಟನೆ ಯಾರು ಮಾಡಿದ್ದಾರೆ? ಅವರಿಗೆ ಕುಮ್ಮಕ್ಕು ಕೊಟ್ಟವರು ಯಾರು? ಎಂಬುವುದನ್ನು ಪೊಲೀಸ್ ಇಲಾಖೆ ಪತ್ತೆ ಹಚ್ಚಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಇತ್ತೀಚೆಗೆ ರಾಜ್ಯದಲ್ಲಿ ಕೆಲವೊಂದು ರಾಜಕಾರಣಿಗಳು ಹಾಗೂ ಬಿಜೆಪಿ ಸಂಘಪರಿವಾರವೂ ಕೋಮು ಭಾವನೆಗೆ ಧಕ್ಕೆ ತರುವ ರೀತಿಯಲ್ಲಿ ಕೆಲಸ ಮಾಡುತ್ತಿದೆ. ಇದರ ಪ್ರೇರಣೆಯಿಂದ ಇಂತಹ ಘಟನೆಗಳು ಸಾಕ್ಷಿಯಾಗುತ್ತದೆ. ಕೋಮುವಾದಕ್ಕೆ ಪ್ರಚೋದನೆ ನೀಡುತ್ತಿರುವ ವ್ಯಕ್ತಿಗಳ ವಿರುದ್ಧ ರಾಜ್ಯ ಸರಕಾರವು ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಹಬೀಬುಲ್ಲಾ ಖಾನ್ ಹೇಳಿದ್ದಾರೆ.

ಪೊಲೀಸರು ತಪ್ಪಿತಸ್ಥ ಕಿಡಿಗೇಡಿಗಳನ್ನು ಪತ್ತೆ ಹಚ್ಚಿ ಅವರನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕು. ಅವರ ವಿರುದ್ಧ ಕೋಮು ಪ್ರಚೋದನೆ ಮೊಕದ್ದಮೆ ದಾಖಲಿಸಬೇಕು ಎಂದು ಅವರು ಪ್ರಕಟನೆಯಲ್ಲಿ ಆಗ್ರಹಿಸಿದ್ದಾರೆ.

ನಾಳೆ ನೀರಿನ ಅದಾಲತ್

ಬೆಂಗಳೂರು, ಮೇ 13: ಬೆಂಗಳೂರು ಜಲ ಮಂಡಳಿಯ ವಿವಿಧ ಉಪವಿಭಾಗಗಳಲ್ಲಿ ನೀರಿನ ಬಿಲ್, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಮೇ 15ರಂದು ಬೆಳಗ್ಗೆ 9:30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ.

ನೀರಿನ ಅದಾಲತ್ ಸೇವಾತಾಣೆಗಳು ಎಚ್‌ಎಂಟಿ ಪೀಣ್ಯ, ದಾಸರಹಳ್ಳಿ, ಪೀಣ್ಯ, ಲಿಂಗಧೀರನಹಳ್ಳಿ, ಅಂದರಹಳ್ಳಿ, ಹೆಗ್ಗನಹಳ್ಳಿ, ಕೊಟ್ಟಿಗೆಪಾಳ್ಯ, ಹೇರೋಹಳ್ಳಿ, ಫ್ರೇಜರ್‌ಟೌನ್, ಮಚಲಿಬೆಟ್ಟ, ಪಿಳ್ಳಣ್ಣಗಾರ್ಡನ್ 12, ಕೆಂಪೇಗೌಡ ಟವರ್, ಕುಮಾರ ಪಾರ್ಕ್, ಜಯಮಹಲ್, ಸಂಜಯನಗರ, ನ್ಯೂ ಬಿಇಎಲ್ ರಸ್ತೆ, ಆರ್. ಟಿ.ನಗರ ಕಾವಲ್ ಬೈರಸಂದ್ರ, ಗಂಗಾನಗರ, ಆನಂದನಗರ, ಮನೋರಾಯನಪಾಳ್ಯ, ಸಿಂಗಾಪುರ, ವಿದ್ಯಾರಣ್ಯಪುರ, ಸಹಕಾರನಗರ, ಎಚ್‌ಎಸ್‌ಆರ್-1, ಕೋಡಿಚಿಕ್ಕನಹಳ್ಳಿ, ಬೊಮ್ಮನಹಳ್ಳಿ, ಕೊಡ್ಲು, ಬೇಗೂರು, ವಿವಿಪುರಂ, ಸುಧಾಮನಗರ-2, ಕೆಂಪೇಗೌಡ ನಗರ, ಜಗಜೀವನರಾಮ್ ನಗರ, ಚಾಮರಾಜಪೇಟೆ, ಬನಗಿರಿನಗರ, ಬಿಎಸ್‌ಕೆ-1-2, ಕುಮಾರಸ್ವಾಮಿ ಲೇಔಟ್, ಇಸ್ರೋ ಲೇಔಟ್, ಪೂರ್ಣ ಪ್ರಜ್ಞಾ ಲೇಔಟ್, ಪೂರ್ವ ವಿಲೇಜ್, ಕಾಡುಗೋಡಿ ವರ್ತೂರು, ಐಎಸ್‌ಪಿಎಸ್. ಹೊರಮಾವು, ರಾಜಾಕೆನಲ್ ವ್ಯಾಪ್ತಿಯಲ್ಲಿ ನೀರಿನ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24X7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆ್ಯಪ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ನೀರಿನ ಸಮರ್ಪಕ ಬಳಕೆ, ಉಳಿತಾಯದ ಬಗ್ಗೆ ಜಲಮಂಡಳಿಯ ಅಭಿಯಾನ

ಬೆಂಗಳೂರು, ಮೇ 13: ನೀರಿನ ಸಮರ್ಪಕ ಬಳಕೆ, ಉಳಿತಾಯ ಹಾಗೂ ಪ್ರತಿಯೊಂದು ಹನಿ ನೀರಿನ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ರೇಡಿಯೊ ಮಿರ್ಚಿಯ ಜೊತೆಗೂಡಿ ಒಂದು ವಾರ ಕಾಲ ಅಭಿಯಾನ ನಡೆಸಲಿದೆ ಎಂದು ಜಲಮಂಡಳಿ ಅಧ್ಯಕ್ಷರಾದ ಡಾ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಮಂಗಳವಾರ ಪ್ರಕಟನೆ ಹೊರಡಿಸಿರುವ ಅವರು, ಈಗಾಗಲೇ ಅಭಿಯಾನವನ್ನು ಆರಂಭಿಸಿದ್ದು, ಮೇ 19ರವರೆಗೆ ಒಂದು ವಾರದ ಕಾಲ ರೇಡಿಯೊ ಮಿರ್ಚಿ ಮೂಲಕ ದಾಖಲಾಗುವಂತಹ ದೂರುಗಳಿಗೆ ಪರಿಹಾರ ನೀಡಲಿದ್ದೇವೆ. ಜನರ ಸಮಸ್ಯೆಗಳಿಗೆ ಉತ್ತರ ಒದಗಿಸುವುದು ನಮ್ಮ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

ಜಲಮಂಡಳಿ ದೂರದ ಕಾವೇರಿ ನದಿಯಿಂದ ನಗರಕ್ಕೆ ನೀರನ್ನು ಪೂರೈಸುತ್ತಿದೆ. ಈ ನೀರಿನ ಪ್ರತೀ ಹನಿಯೂ ಸಮರ್ಪಕವಾಗಿ ಬಳಕೆಯಾಗಬೇಕು. ಅದರ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಿದ್ದೇವೆ. ಜನಜಾಗೃತಿಯ ಜೊತೆಯಲ್ಲಿಯೇ ಜನರ ದೂರುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಒಂದು ವಾರದ ಅಭಿಯಾನ ನಡೆಸಲಾಗುತ್ತದೆ. ಜನರು ತಮ್ಮ ದೂರುಗಳನ್ನು 9833583983 ಸಂಖ್ಯೆಗೆ ವಾಟ್ಸ್ ಆ್ಯಪ್ ಮೂಲಕ ನೀಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಮಾಧ್ಯಮ-ಶಿಕ್ಷಣದ ಮಧ್ಯೆ ಅಂತರ ನಿವಾರಣೆ

ಮೇ 16ರಂದು ಆನ್‌ಲೈನ್ ಕಾರ್ಯಾಗಾರ

ಬೆಂಗಳೂರು, ಮೇ 13: ಕರ್ನಾಟಕ ಮಾಧ್ಯಮ ಅಕಾಡಮಿ, ಫ್ಯಾಕ್ಟ್ ಶಾಲಾ ಯೂನಿವರ್ಸಿಟಿ ನೆಟ್‌ವರ್ಕ್ ಹಾಗೂ ಮಣಿಪಾಲ್ ಅಕಾಡಮಿ ಆಫ್ ಹೈಯರ್ ಎಜುಕೇಶನ್ ಸಂಯುಕ್ತಾಶ್ರಯದಲ್ಲಿ 'ಪತ್ರಿಕೋದ್ಯಮ ಶಿಕ್ಷಕರ ಸಬಲೀಕರಣ-ಮಾಧ್ಯಮ ಸಾಕ್ಷರತೆ ಮತ್ತು ಕೌಶಲ್ಯಗಳ ಉನ್ನತೀಕರಣ' ತರಗತಿಗಳ ಮುಖೇನ ಮಾಧ್ಯಮ ಮತ್ತು ಶಿಕ್ಷಣದ ಮಧ್ಯದ ಅಂತರ ನಿವಾರಣೆ ಕುರಿತ ಆನ್‌ಲೈನ್ ಕಾರ್ಯಾಗಾರವನ್ನು ಮೇ 16ರ ಬೆಳಗ್ಗೆ 10:30ಕ್ಕೆ ಹಮ್ಮಿಕೊಳ್ಳಲಾಗಿದೆ.

ಮಾಧ್ಯಮ ಸಾಕ್ಷರತೆಯನ್ನು ತಮ್ಮ ಬೋಧನಾ ಅಭ್ಯಾಸದಲ್ಲಿ ಪರಿಣಾಮಕಾರಿಯಾಗಿ ಸಂಯೋಜಿಸಲು ಶಿಕ್ಷಕರನ್ನು ಕೌಶಲ್ಯಗಳೊಂದಿಗೆ ಸಜ್ಜುಗೊಳಿಸುವ ಗುರಿಯನ್ನು ಆನ್‌ಲೈನ್ ಕಾರ್ಯಾಗಾರ ಹೊಂದಿದೆ. ಆನ್‌ಲೈನ್ ಕಾರ್ಯಾಗಾರದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಮೇ 14ರೊಳಗಾಗಿ ಇ-ಮೇಲ್: karna-takamediaacademy@gmail.comನಲ್ಲಿ ನೊಂದಾಯಿಸಿಕೊಳ್ಳತಕ್ಕದ್ದು ಹಾಗೂ ಆನ್‌ಲೈನ್ ಕಾರ್ಯಾಗಾರ ಲಿಂಕ್ https://meet.google.cim/eyg-tpjs-wxi ಮೂಲಕ ಕಾರ್ಯಾಗಾರದಲ್ಲಿ ಭಾಗವಹಿಸಬಹುದು. ಭಾಗವಹಿಸುವ ಎಲ್ಲರಿಗೂ ಪ್ರಮಾಣಪತ್ರ ವಿತರಿಸಲಾಗುವುದು ಎಂದು ಪ್ರಕಟನೆ ತಿಳಿಸಿದೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಟಿ.ಚೌಡಯ್ಯ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು - 560020.
ಸಂ: ಬೆಂಅಪ್ರಾ/ನಯೋಸ/CLU-38/617/2025-26 ದಿನಾಂಕ: 13.05.2025
ಪ್ರಕಟಣೆ
ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು ವ್ಯವಸಾಯ ವಲಯದಿಂದ ವಸತಿ ಉಪಯೋಗಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ನಗರ ಯೋಜಕ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

ಕ್ರ ಸಂ.	ಅರ್ಜಿದಾರರ ಹೆಸರು	ತಾಲ್ಲೂಕು	ಹೋಬಳಿ	ಗ್ರಾಮದ ವಿವರ	ಸರ್ವೆ ನಂ.	ವಿಸ್ತೀರ್ಣ ಎ-ಗುಂ	ಸಂಪೂರ್ಣ ಮಹಾಯೋಜನೆ-2015ರ ಪ್ರಕಾರ ಭೂಉಪಯೋಗ	ಬದಲಾವಣೆ ಕೋರಿರುವ ಭೂಉಪಯೋಗ
1	M/s. Kilai Builders Pvt Ltd & Sri.Sadashiva K.S	ಬೆಂಗಳೂರು ಪೂರ್ವ	ವರ್ತೂರು	ಸೂಲಿಕುಂಟೆ	29/17	1-06	ವ್ಯವಸಾಯ ವಲಯ	ವಸತಿ
2					29/19	0-32		
3					29/20	1-03		
4					29/22	2-12		
5					29/23	4-00		
			ಒಟ್ಟು			9-13		

ಷರಾ:- ಅರ್ಜಿದಾರರು ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವಾಗ ಸ್ಥಳೀಯ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತದೆ. ವಿನ್ಯಾಸ ಅಭಿವೃದ್ಧಿಯಿಂದ ಸುತ್ತ ಮುತ್ತಲಿನ ಪ್ರದೇಶ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಯೋಜನಾಬದ್ಧವಾದ ವಿನ್ಯಾಸ ರಚನೆಯಿಂದ ಸರ್ಕಾರಕ್ಕೆ ತೆರಿಗೆಗಳು ಉತ್ಪತ್ತಿಯಾಗುತ್ತದೆ. ಈ ಜಮೀನಿನ ಸುತ್ತುಮುತ್ತಲಿನ ಪ್ರದೇಶದಲ್ಲಿ ಈಗಾಗಲೇ ಮಿಶ್ರ ಅಭಿವೃದ್ಧಿಗಳು ಬಂದಿರುವುದರಿಂದ ವಾಸದ ಬೆಳವಣಿಗೆಗಳನ್ನು ಕೈಗೊಂಡಿದ್ದಲ್ಲಿ ಯೋಜಿತ ಬೆಳವಣಿಗೆಗೆ ಬೇಕಾಗುವ ಮೂಲ ಸೌಕರ್ಯಗಳು ಲಭ್ಯವಾಗುತ್ತದೆ ಎಂಬ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತ, ಪ್ರಶ್ನಿತ ಜಮೀನುಗಳನ್ನು 'ವ್ಯವಸಾಯ ವಲಯ' ದಿಂದ 'ವಸತಿ ಉಪಯೋಗಕ್ಕೆ' ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.
ಸಹಿ/- ನಗರ ಯೋಜಕ ಸದಸ್ಯರು, ಬೆಂಅಪ್ರಾ, ಬೆಂಗಳೂರು